**CC 58/2013**
**CW17 - PW9**

# 3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ, ಚನ್ನರಾಯಪಟ್ಟಣ

## CC 58/2013

| | | | |
|---|---|---|---|
| ಸಾಕ್ಷಿದಾರರ ಹೆಸರು | ಃ | ಮಾರಪ್ಪ | **C.W – 17** |
| ತಂದೆಯ ಹೆಸರು | ಃ | ಅರಸಪ್ಪ | **P.W – 9** |
| ವಯಸ್ಸು | ಃ | 65 ವರ್ಷ | |
| ಉದ್ಯೋಗ | ಃ | ನಿವೃತ್ತ ವೃತ್ತ ನಿರೀಕ್ಷಕರು, ಚನ್ನರಾಯಪಟ್ಟಣ | **ಪ್ರಮಾಣ ವಚನ ಬೋಧಿಸಲಾಯಿತು.** |
| ವಾಸ | ಃ | ಬೆಂಗಳೂರು | ದಿನಾಂಕಃ **10.11.2023** |

---

ಭಾರತೀಯ ದಂಡ ಪ್ರಕ್ರಿಯಾ ಸಂಹಿತೆ ಕಲಂ **299** ರ ಅಅಡಿಯಲ್ಲಿ ಸಾಕ್ಷಿಯ ಮುಖ್ಯವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರವರಿಂದ

ನಾನು ಜುಲೈ 2011 ರಿಂದ ಅಕ್ಟೋಬರ್ 2013 ರವರೆಗೆ ಚನ್ನರಾಯಪಟ್ಟಣದಲ್ಲಿ ವೃತ್ತ ನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 21.01.2012 ರಂದು ಈ ಪ್ರಕರಣದ ಕಡತವನ್ನು ಚಾ ಸಾ 16 ರವರಿಂದ ಪಡೆದುಕೊಂಡು ತನಿಖೆಯನ್ನು ಮುಂದುವರೆಸಿ ಕೃತ್ಯ ಸ್ಥಳಕ್ಕೆ ಭೇಟಿ ನೀಡಿ ಪಂಚರಾದ ಚಾ ಸಾ 3 ಮತ್ತು 4 ರವರನ್ನು ಸ್ಥಳಕ್ಕೆ ಕರೆದು ವಿಚಾರ ತಿಳಿಸಿ ಚಾ ಸಾ 1 ರವರು ತೋರಿಸಿದ ಸ್ಥಳವನ್ನು ಪಂಚನಾಮೆಯನ್ನು ಜರುಗಿಸಿರುತ್ತೇನೆ. ನಂತರ ಆರೋಪಿ ಮತ್ತು ಮಾಲಿನ ಪತ್ತೆ ಕಾರ್ಯಕ್ಕೆ ಪಿ ಎಸ್ ಐ ಮತ್ತು ಸಿಬ್ಬಂದಿಯನ್ನು ನೇಮಿಸಿದ್ದು, ಅದೇ ದಿನ ಪಿ ಎಸ್ ಐ ಮತ್ತು ಸಿಬ್ಬಂದಿಗಳು ಆರೋಪಿತರನ್ನು ಶ್ರವಣಬೆಳಗೊಳದ ಬಸ್ ನಿಲ್ದಾಣದಲ್ಲಿ ಪತ್ತೆ ಮಾಡಿ ಠಾಣೆಗೆ ಬಂದು ನನ್ನ ಮುಂದೆ ಹಾಜರುಪಡಿಸಿ ವರದಿ ಮಾಡಿರುತ್ತಾರೆ. ನಂತರ ಆರೋಪಿತರನ್ನು ವಿಚಾರಿಸಿ ಅವರುಗಳ ಸ್ವಇಚ್ಛಾ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ಆರೋಪಿತರು ಸ್ವಇಚ್ಛಾ ಹೇಳಿಕೆಯಲ್ಲಿ ಚಿನ್ನದ ಸರವನ್ನು ಕಿತ್ತುಕೊಂಡಿರುವುದಾಗಿ ಒಪ್ಪಿಕೊಂಡಿದ್ದು ಮತ್ತು ಕಿತ್ತುಕೊಂಡ ಸ್ಥಳವನ್ನು ತೋರಿಸುವುದಾಗಿ ತಿಳಿಸಿರುತ್ತಾರೆ. ಕಿತ್ತುಕೊಂಡ ಚಿನ್ನದ ಚೈನ್ ನ್ನು ಪಂಚರ ಮುಂದೆ ಹಾಜರುಪಡಿಸಿರುತ್ತಾರೆ. ನಂತರ ಸದರಿ ಚಿನ್ನದ ಚೈನ್ ನ್ನು ಪಂಚರಾದ ಚಾ ಸಾ 5 ರಿಂದ

7 ರವರ ಸಮಕ್ಷಮ ಅಮಾನತ್ತು ಮಹಜರ್ ನ್ನು ಜರುಗಿಸಿ ಚಾ ಸಾ 8 ರವರ ಸಮಕ್ಷಮ ಸದರಿ ಚಿನ್ನದ ಸರವನ್ನು ಪರಿಶೀಲಿಸಿ ಸದರಿ ಚಿನ್ನದ ಸರವು 16 ಗ್ರಾಂ ತೂಕದ್ದಾಗಿರುತ್ತದೆ ಎಂದು ತಿಳಿದುಬಂದಿರುತ್ತದೆ. ಪಂಚರ ಸಮಕ್ಷಮ ಅಮಾನತ್ತುಪಡಿಸಿಕೊಂಡ ಚಿನ್ನದ ಸರವನ್ನು ಠಾಣಾ ಮಾಲುಪಟ್ಟಿ ಸಂಖ್ಯೆ 7/2012 ರಲ್ಲಿ ನಮೂದಿಸಿ ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಸದರಿ ಪಂಚನಾಮೆಯನ್ನು ಸಂಜೆ 04.30–05.00 ಗಂಟೆವರೆಗೆ ಬರೆಯಲಾಯಿತು. ನಂತರ ಆರೋಪಿತರನ್ನು ದಸ್ತಗಿರಿ ಕ್ರಮ ಅನುಸರಿಸಿ ದಸ್ತಗಿರಿ ಮಾಡಿ ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ ನಂತರ ಸಾಕ್ಷಿದಾರರಾದ ಚಾ ಸಾ 2, 5, 6 ರವರುಗಳ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ನಂತರ ಚಾ ಸಾ 1 ರವರ ಮರುಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ನಂತರ ದಿನಾಂಕ 02.02.2012 ರಂದು ನ್ಯಾಯಾಲಯದ ಆದೇಶದ ಮೇರೆಗೆ ಚಿನ್ನದ ಸರವನ್ನು ಪಂಚರಾದ ಚಾ ಸಾ 2 ರವರ ಸಮಕ್ಷಮ ಮಹಜರ್ ಕ್ರಮ ಜರುಗಿಸಿ ಚಾ ಸಾ 1 ರವರಿಗೆ ಸದರಿ ಚಿನ್ನದ ಸರವನ್ನು ನೀಡಿರುತ್ತೇವೆ. ನಂತರ ದಿನಾಂಕ 30.04.2012 ರಂದು ಚಾ ಸಾ 9 ರಿಂದ 13 ರವರ ಹೇಳಿಕೆಂಯನ್ನು ಪಡೆದು ತನಿಖೆಯನ್ನುಪೂರ್ಣಗೊಳಿ ಆರೋಪಿತರ ಮೇಲೆ ಆರೋಪವು ಸಾಬೀತಾದ ಮೇರೆಗೆ ಆರೋಪಿಯ ವಿರುದ್ಧ ದೋಷಾರೋಪಣ ಪತ್ರವನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ

ಕೃತ್ಯ ಸ್ಥಳ ಮಹಜರ್ ನ್ನು ಸಾಕ್ಷಿಗೆ ತೋರಿಸಲಾಗಿ ಅದನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿ ಪಿ 3 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿ ಪಿ 3(ಸಿ) ಎಂದು ಗುರುತಿಸಲಾಯಿತು.

ಅಮಾನತ್ತು ಮಹಜರ್ ನ್ನು ಸಾಕ್ಷಿಗೆ ತೋರಿಸಲಾಗಿ ಅದನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿ ಪಿ 2 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿ ಪಿ 2(ಡಿ) ಎಂದು ಗುರುತಿಸಲಾಯಿತು.

**CC 58/2013**
**CW17 - PW9**

ಆರೋಪಿತರನ್ನು ಠಾಣೆಗೆ ತಂದು ಹಾಜರುಪಡಿಸಿದ ಮಾಡಿದ ಬಗ್ಗೆ ವರದಿಯನ್ನು ಸಾಕ್ಷಿಗೆ ತೋರಿಸಲಾಗಿ ಅದನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿ ಪಿ 5 ಎಂದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿ ಪಿ 5(ಬಿ) ಎಂದು ಗುರುತಿಸಲಾಯಿತು.

**ಮರುವಿಚಾರಣೆ** – ಇಲ್ಲ

(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

ಸಹಿ/-

3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು

ಮತ್ತು ಜೆ.ಎಂ.ಎಫ್.ಸಿ.ಚನ್ನರಾಯಪಟ್ಟಣ